ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಯೋಗಾಲಯ ಮತ್ತು ಶೌಚಾಲಯಗಳ ಕೊರತೆ

255 (552) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸಿಂಧನೂರು ತಾಲ್ಲೂಕಿನಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಯೋಗಾಲಯ ಮತ್ತು ಶೌಚಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಈ ಕಾಲೇಜುಗಳಲ್ಲಿ ಪ್ರಯೋಗಾಲಯ ಮತ್ತು ಶೌಚಾಲಯಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಈ) ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ; ಇದಕ್ಕಾಗಿ ಎಷ್ಟು ಪ್ರಮಾಣದ ಅನುದಾನವನ್ನು ಬಿಡುಗಡೆ ಮಾಡಲಾಗುವುದು ? (ಮಾಹಿತಿ ನೀಡುವುದು)

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ಬಂದಿದೆ.

ಇ) ಅನುದಾನದ ಲಭ್ಯತೆಯನ್ನಾಧರಿಸಿ ಮೂಲ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಅನುದಾನದ ಲಭ್ಯತೆಯ ನಂತರ ಸದರಿ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಿದ್ದು, ಕಾಮಗಾರಿಯ ಅನುಮೋದಿತಾ ಅಂದಾಜು ವೆಚ್ಚಕ್ಕನುಗುಣವಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿ

242 (564) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಹಾಸನ ತಾಲ್ಲೂಕು, ಕಟ್ಟಾಯ ಗ್ರಾಮ ಹೋಬಳಿ ಕೇಂದ್ರವಾಗಿದ್ದು ಪ್ರಾಥಮಿಕ ಆರೋಗ್ಯ ಕೇಂದ್ರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;